# ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ

(ಕರ್ನಾಟಕ ಸರ್ಕಾರದ ಅಧೀನ ಸಂಸ್ಥೆ)

ನಂ. 49, 4 ಮತ್ತು 5ನೇ ಮಹಡಿ, 'ಈಸ್ಟ್ ವಿಂಗ್', ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು – 560 001.
ದೂರವಾಣಿ : 080–2226 5383 ವೆಬ್‌ಸೈಟ್ : www.kiadb.in ಇ–ಮೇಲ್ : ceoem@kiadb.in

ಸಂಖ್ಯೆ:ಕ.ಕೈ.ಪ್ರ.ಮಂ/ಕೇಂ.ಕ/ಆಡಳಿತ-63(3)/ 4518 /2025-26 ದಿನಾಂಕ: 03.06.2025.

:: **ಸುತ್ತೋಲೆ** ::

ವಿಷಯ: ಮಂಡಳಿಯು ಏಕ ಘಟಕ ಸಂಕೀರ್ಣ ಯೋಜನೆಗಳಿಗಾಗಿ ಹಂಚಿಕೆ ಮಾಡಲಾದ ಜಮೀನು ಮತ್ತು ಕೈಗಾರಿಕಾ ಪ್ರದೇಶಗಳಲ್ಲಿ ಹಂಚಿಕೆ ಮಾಡಲಾದ ನಿವೇಶನಗಳಿಗೆ ಸಂಬಂಧಿಸಿದಂತೆ ಶುದ್ಧ ಕ್ರಯ ನೆರವೇರಿಸಲು ಸ್ವೀಕೃತವಾಗುವ ಅರ್ಜಿಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸುವ ಬಗ್ಗೆ.

-oOo-

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು, ರಾಜ್ಯಾದ್ಯಂತ ಸಾವಿರಾರು ಎಕರೆ ವಿಸ್ತೀರ್ಣದ ಜಮೀನನ್ನು ಕೈಗಾರಿಕಾಭಿವೃದ್ಧಿಗಾಗಿ ಭೂಸ್ವಾಧೀನಪಡಿಸಿಕೊಂಡು ಕೈಗಾರಿಕೆಗಳನ್ನು ಸ್ಥಾಪಿಸುವ ನಿಟ್ಟಿನಲ್ಲಿ ಉದ್ದಿಮೆದಾರರಿಗೆ ಅವಶ್ಯಕತೆಗಳಿಗೆ ಅನುಗುಣವಾಗಿ ಭೂಮಿಯನ್ನು ಹಂಚಿಕೆ ಮಾಡುತ್ತಾ ಬಂದಿರುತ್ತದೆ.

ಮಂಡಳಿಯು ಏಕ ಘಟಕ ಸಂಕೀರ್ಣ ಯೋಜನೆಗಳಿಗಾಗಿ ಹಂಚಿಕೆ ಮಾಡಲಾದ ಜಮೀನು ಮತ್ತು ಕೈಗಾರಿಕಾ ಪ್ರದೇಶಗಳಲ್ಲಿ ಹಂಚಿಕೆ ಮಾಡಲಾದ ನಿವೇಶನಗಳಿಗೆ ಸಂಬಂಧಿಸಿದಂತೆ, ಉದ್ದಿಮೆದಾರರು ಯೋಜನೆಯನ್ನು ಅನುಷ್ಠಾನಗೊಳಿಸಲಾದ ನಂತರದಲ್ಲಿ ನಿಯಮಾನುಸಾರ ಶುದ್ಧ ಕ್ರಯ ನೆರವೇರಿಸುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. ಆದರೆ, ವಲಯ ಕಛೇರಿ ವ್ಯಾಪ್ತಿಯಲ್ಲಿ ಉದ್ದಿಮೆದಾರರಿಂದ ಶುದ್ಧಕ್ರಯ ನೆರವೇರಿಸುವಂತೆ ಕೋರಿ ಸ್ವೀಕೃತವಾಗುವ ಅರ್ಜಿಗಳನ್ನು ಪರಿಶೀಲಿಸಿ, ಪ್ರಸ್ತಾವನೆಗಳನ್ನು ನಿಗದಿತ ಕಾಲಾವಧಿಯೊಳಗೆ ಸಲ್ಲಿಸುವಲ್ಲಿ ವಿಳಂಬ ಉಂಟಾಗುತ್ತಿರುವುದು ಗಮನಕ್ಕೆ ಬಂದಿರುತ್ತದೆ.

ಆದುದರಿಂದ, ಮಂಡಳಿಯ ಕೈಗಾರಿಕಾ ಪ್ರದೇಶಗಳಲ್ಲಿನ ನಿವೇಶನ / ಏಕಘಟಕ ಸಂಕೀರ್ಣ ಯೋಜನೆಗಳಿಗೆ ಸಂಬಂಧಿಸಿದಂತೆ ಉದ್ದಿಮೆದಾರರಿಂದ ಶುದ್ಧಕ್ರಯ ನೆರವೇರಿಸಲು ಕೋರಿ ಸ್ವೀಕೃತವಾಗುವ ಅರ್ಜಿಗಳಿಗೆ ಸಂಬಂಧಿಸಿದ ನಿವೇಶನಗಳ ಸ್ಥಳ ಪರಿಶೀಲನೆ ನಡೆಸಿ, ಜಿ.ಪಿ.ಎಸ್. ಫೋಟೋಗಳನ್ನು ಒಳಗೊಂಡಂತೆ ವಾಸ್ತವಾಂಶದ ವರದಿಯನ್ನು ಅರ್ಜಿ ಸ್ವೀಕೃತವಾದ ದಿನಾಂಕದಿಂದ 30 ದಿವಸಗಳ ಒಳಗಾಗಿ ಮುಂದಿನ ಕ್ರಮಕ್ಕಾಗಿ ಕೇಂದ್ರ ಕಛೇರಿಗೆ ಸಲ್ಲಿಸಲು ಎಲ್ಲಾ ಕಾರ್ಯಪಾಲಕ ಅಭಿಯಂತರರುಗಳಿಗೆ ಸೂಚಿಸಿದೆ.

ತಪ್ಪಿದ್ದಲ್ಲಿ, ಸಂಬಂಧಪಟ್ಟ ಕಾರ್ಯಪಾಲಕ ಅಭಿಯಂತರರುಗಳ ವಿರುದ್ಧ ನಿಯಮಾನುಸಾರ ಶಿಸ್ತುಕ್ರಮ ಜರುಗಿಸಲು ಕ್ರಮವಹಿಸಲಾಗುವುದು.

ಮುಖ್ಯ ಕಾರ್ಯನಿರ್ವಹಣಾಧಿಕಾರಿ
ಹಾಗೂ ಕಾರ್ಯನಿರ್ವಾಹಕ ಸದಸ್ಯರು.

ಗೆ.

1. ಜಂಟಿ ನಿರ್ದೇಶಕರು, ಕೆ.ಐ.ಎ.ಡಿ.ಬಿ. ಕೇಂದ್ರ ಕಛೇರಿ, ಬೆಂಗಳೂರು.

2. ಕಾರ್ಯದರ್ಶಿಗಳು-1, ಕೆ.ಐ.ಎ.ಡಿ.ಬಿ. ಕೇಂದ್ರ ಕಛೇರಿ, ಬೆಂಗಳೂರು.
3. ಕಾರ್ಯದರ್ಶಿಗಳು-2, ಕೆ.ಐ.ಎ.ಡಿ.ಬಿ. ಕೇಂದ್ರ ಕಛೇರಿ, ಬೆಂಗಳೂರು.
4. ಕಾರ್ಯದರ್ಶಿಗಳು-3, ಕೆ.ಐ.ಎ.ಡಿ.ಬಿ. ಕೇಂದ್ರ ಕಛೇರಿ, ಬೆಂಗಳೂರು
5. ಕಾರ್ಯಪಾಲಕ ಅಭಿಯಂತರರು-1, ಕೆ.ಐ.ಎ.ಡಿ.ಬಿ. ವಲಯ ಕಛೇರಿ, ಬೆಂಗಳೂರು.
6. ಕಾರ್ಯಪಾಲಕ ಅಭಿಯಂತರರು-2, ಕೆ.ಐ.ಎ.ಡಿ.ಬಿ. ವಲಯ ಕಛೇರಿ, ಬೆಂಗಳೂರು.
7. ಕಾರ್ಯಪಾಲಕ ಅಭಿಯಂತರರು-3, ಕೆ.ಐ.ಎ.ಡಿ.ಬಿ. ವಲಯ ಕಛೇರಿ, ಬೆಂಗಳೂರು.
8. ಕಾರ್ಯಪಾಲಕ ಅಭಿಯಂತರರು, ಕೆ.ಐ.ಎ.ಡಿ.ಬಿ. ವಲಯ ಕಛೇರಿ, ತುಮಕೂರು.
9. ಕಾರ್ಯಪಾಲಕ ಅಭಿಯಂತರರು, ಕೆ.ಐ.ಎ.ಡಿ.ಬಿ. ವಲಯ ಕಛೇರಿ, ದಾವಣಗೆರೆ.
10. ಕಾರ್ಯಪಾಲಕ ಅಭಿಯಂತರರು, ಕೆ.ಐ.ಎ.ಡಿ.ಬಿ. ವಲಯ ಕಛೇರಿ, ಧಾರವಾಡ.
11. ಕಾರ್ಯಪಾಲಕ ಅಭಿಯಂತರರು, ಕೆ.ಐ.ಎ.ಡಿ.ಬಿ. ವಲಯ ಕಛೇರಿ, ಬೆಳಗಾವಿ.
12. ಕಾರ್ಯಪಾಲಕ ಅಭಿಯಂತರರು, ಕೆ.ಐ.ಎ.ಡಿ.ಬಿ. ವಲಯ ಕಛೇರಿ, ಕಲಬುರಗಿ.
13. ಕಾರ್ಯಪಾಲಕ ಅಭಿಯಂತರರು, ಕೆ.ಐ.ಎ.ಡಿ.ಬಿ. ವಲಯ ಕಛೇರಿ, ಬಳ್ಳಾರಿ.
14. ಕಾರ್ಯಪಾಲಕ ಅಭಿಯಂತರರು, ಕೆ.ಐ.ಎ.ಡಿ.ಬಿ. ವಲಯ ಕಛೇರಿ, ಮಂಗಳೂರು.
15. ಕಾರ್ಯಪಾಲಕ ಅಭಿಯಂತರರು, ಕೆ.ಐ.ಎ.ಡಿ.ಬಿ. ವಲಯ ಕಛೇರಿ, ಹಾಸನ.
16. ಕಾರ್ಯಪಾಲಕ ಅಭಿಯಂತರರು, ಕೆ.ಐ.ಎ.ಡಿ.ಬಿ. ವಲಯ ಕಛೇರಿ, ಮೈಸೂರು.
17. ಕಛೇರಿ / ಕಡತ ಪ್ರತಿ.